ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.08/2017-18 ದಿನಾಂಕ: 31-08-2018

**ಆಯುರ್ವೇದ, ಹೋಮಿಯೋಪತಿ, ನ್ಯಾಚುರೋಪತಿ & ಯೋಗ, ಯುನಾನಿ ಕೋರ್ಸುಗಳ ಪ್ರವೇಶಾತಿ 2018-19**

**ಸೂಚನೆಗಳು**

- ಸರ್ಕಾರದ ಆದೇಶದಂತೆ ಆಯುರ್ವೇದ, ಹೋಮಿಯೋಪತಿ, ನ್ಯಾಚುರೋಪತಿ & ಯೋಗ, ಯುನಾನಿ ಕೋರ್ಸುಗಳ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (ಕಪಪ್ರಾ) UG NEET 2018 ರಲ್ಲಿ ಅರ್ಹತೆಯನ್ನು ಪಡೆದಿರುವ ಹಾಗು ಅರ್ಹತಾ ಮಾನದಂಡಗಳನ್ನು ಪೂರೈಸುವ ಅರ್ಹ ಕರ್ನಾಟಕದ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ. NEET-UG 2018 ರಲ್ಲಿ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ಅಭ್ಯರ್ಥಿಗಳು ಮಾತ್ರ ಆಯುಷ್ ಕೋರ್ಸುಗಳ ಪ್ರವೇಶಕ್ಕೆ ನೊಂದಣಿ ಮಾಡಿಕೊಳ್ಳಲು ಅರ್ಹರಿರುತ್ತಾರೆ.

| Category | Qualifying Criteria | Marks Range |
|---|---|---|
| OTHERS | 50th Percentile | 691-119 |
| OBC | 40th Percentile | 118-96 |
| SC | 40th Percentile | 118-96 |
| ST | 40th Percentile | 118-96 |
| UR & PH | 45th Percentile | 118-107 |
| OBC & PH | 40th Percentile | 106-96 |
| SC & PH | 40th Percentile | 106-96 |
| ST & PH | 40th Percentile | 106-96 |

- ಇಚ್ಛೆಯುಳ್ಳ ಅರ್ಹ ಅಭ್ಯರ್ಥಿಗಳು ದಿನಾಂಕ 01-09-2018 ರ ಮಧ್ಯಾಹ್ನ 1.00 ಗಂಟೆಯಿಂದ 04-09-2018ರ ಸಂಜೆ 5.30 ರ ವರೆಗೆ ನೊಂದಣಿ ಮಾಡಿಕೊಳ್ಳಬಹುದಾಗಿದೆ. ನೊಂದಣಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ 05-09-2018.

- ನೊಂದಣಿ ಶುಲ್ಕ, ದಾಖಲಾತಿ ಪರಿಶೀಲನೆಯ ವೇಳಾಪಟ್ಟಿ ಮತ್ತು ವಿಧಾನ, ದಾಖಲಾತಿ ಪರಿಶೀಲನೆಗೆ ಸಲ್ಲಿಸಬೇಕಾದ ಮೂಲ ದಾಖಲಾತಿಗಳು, ಹಾಗು ಇತರೆ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿಕೊಂಡು ನೊಂದಣಿ ಮಾಡಿ ದಾಖಲಾತಿ ಪರಿಶೀಲನೆಗೆ ಹಾಜರಾಗಬಹುದು.

- UG NEET 2018 ರಲ್ಲಿ ಅರ್ಹತೆಯನ್ನು ಪಡೆದಿರುವ ಮತ್ತು ಈಗಾಗಲೇ ಇಂಜಿನಿಯರಿಂಗ್, ವೈದ್ಯಕೀಯ, ಫಾರ್ಮ ಸೈನ್ಸ್, ಮುಂತಾದ ಕೋರ್ಸುಗಳಿಗೆ ದಾಖಲಾತಿ ಪರಿಶೀಲನೆಯನ್ನು ಮಾಡಿರುವ ಅಭ್ಯರ್ಥಿಗಳು ಮತ್ತೊಮ್ಮೆ ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಅಗತ್ಯವಿರುವುದಿಲ್ಲ. ನೊಂದಣಿ ಮಾಡದಿರುವ ಅಥವಾ ಇಲ್ಲಿಯವರೆಗೆ ದಾಖಲಾತಿ ಪರಿಶೀಲನೆಯನ್ನು ಮಾಡದೇ ಇರುವ ಕರ್ನಾಟಕದ ಅರ್ಹ ಅಭ್ಯರ್ಥಿಗಳು ಮಾತ್ರ ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಿ ದಾಖಾಲತಿ ಪರಿಶೀಲನೆಗೆ ಹಾಜರಾಗಬಹುದು.

- ನೊಂದಣಿ ಮಾಡದೇ ಇರುವ ಅಥವಾ ನೊಂದಣಿ ಮಾಡಿ ದಾಖಲಾತಿಗಳನ್ನು ಪರಿಶೀಲಿಸಿಕೊಳ್ಳದೆ ಇರುವ ಅಭ್ಯರ್ಥಿಗಳು, ಹೊಸದಾಗಿ ನೊಂದಣಿ ಮಾಡಿ ದಾಖಲೆ ಪರಿಶೀಲನೆ ಮಾಡಿ ಅರ್ಹಗೊಂಡಲ್ಲಿ ಮಾತ್ರ ಪ್ರಾಧಿಕಾರದಿಂದ ಆಯುಷ್ ಸೀಟುಗಳನ್ನು ತೆಗೆದುಕೊಳ್ಳಲು ಅರ್ಹರಿರುತ್ತಾರೆ.

- ಈಗಾಗಲೇ ವೈದ್ಯಕೀಯ ಅಥವಾ ವೆಟರಿನರಿ ಸೀಟನ್ನು ಪಡೆದು ಕಾಲೇಜಿನಲ್ಲಿ ಪ್ರವೇಶ ಪಡೆದವರು ಆಯುಷ್ ಸೀಟುಗಳ ಹಂಚಿಕೆಗೆ ಅರ್ಹತೆಯನ್ನು ಪಡೆಯುವುದಿಲ್ಲ.

- 2018 ರ ಪೂರಕ ಪರೀಕ್ಷೆಯಲ್ಲಿ ಅರ್ಹತೆಯನ್ನು ಪಡೆದ ಅಭ್ಯರ್ಥಿಗಳು 2018ನೇ ಸಾಲಿನ ಆಯುಷ್ ಸೀಟು ಹಂಚಿಕೆಗೆ ಅರ್ಹರಾಗುವುದಿಲ್ಲ.

- ಪ್ರಾಧಿಕಾರದ ಮುಖಾಂತರ ಸೀಟನ್ನು ಹಂಚಿಕೆ ಮಾಡಿಕೊಂಡು ಈಗಾಗಲೇ ಕಾಲೇಜುಗಳಲ್ಲಿ ಪ್ರವೇಶ ಪಡೆದಿರುವ ಅಭ್ಯರ್ಥಿಗಳು ಪೋಷಕರೊಡನೆ ಚರ್ಚಿಸಿ, ಆಯುಷ್ ಕೋರ್ಸುಗಳಿಗೆ ಆಸಕ್ತಿ ಇದ್ದರೆ ಮಾತ್ರ ಮತ್ತು ನಿಗದಿತ ದಿನಾಂಕದೊಳಗೆ ಮೂಲ ದಾಖಲಾತಿಗಳನ್ನು ತಾವು ಅಭ್ಯಸಿಸುತ್ತಿರುವ ಕಾಲೇಜುಗಳಿಂದ ಪಡೆಯುವುದನ್ನು ಖಾತ್ರಿಪಡಿಸಿಕೊಂಡ ನಂತರವೇ ಈ ಸುತ್ತಿನಲ್ಲಿ ಭಾಗವಹಿಸಲು ಸೂಚಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರ ಪರವಾಗಿ